# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 757 |
| ಸದಸ್ಯರ ಹೆಸರು | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23.02.2022 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಹೊಸ ತಾಲ್ಲೂಕುಗಳನ್ನು ಘೋಷಣೆ ಮಾಡಲಾಗಿದೆ; ಪ್ರಸಕ್ತ ಸಾಲಿನಲ್ಲಿ ಹೊಸ ತಾಲ್ಲೂಕುಗಳನ್ನು ಘೋಷಣೆ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; (ಸಂಪೂರ್ಣ ವಿವರ ನೀಡುವುದು) | ಕಳೆದ ಎರಡು ವರ್ಷಗಳಲ್ಲಿ ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಅರಕೇರಾವನ್ನು ದಿನಾಂಕ:29-09-2020 ರ ಸರ್ಕಾರದ ಆದೇಶದಲ್ಲಿ ಹೊಸದಾಗಿ ತಾಲ್ಲೂಕು ಕೇಂದ್ರವನ್ನಾಗಿ ಘೋಷಿಸಲಾಗಿದೆ. ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಯ ಕೋಟಾ ಹೋಬಳಿಯನ್ನು ಹೊಸ ತಾಲ್ಲೂಕನ್ನಾಗಿ ಘೋಷಣೆ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. |
| ಆ) | ರಾಮನಗರ ಜಿಲ್ಲೆಯ ಹಾರೋಹಳ್ಳಿಯನ್ನು ನೂತನ ತಾಲ್ಲೂಕು ಎಂದು ಘೋಷಣೆ ಮಾಡಲಾಗಿದ್ದು, ಇಲ್ಲಿ ತಾಲ್ಲೂಕು ಮಟ್ಟದ ಕಛೇರಿಗಳನ್ನು ನಿರ್ಮಾಣ ಮಾಡಲು ಸ್ಥಳಗಳನ್ನು ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ, ಯಾವ ಯಾವ ಕಛೇರಿಗಳಿಗೆ ಎಲ್ಲೆಲ್ಲಿ ಮತ್ತು ಎಷ್ಟು ಜಾಗವನ್ನು ಗುರುತಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು) | ಸರ್ಕಾರದ ಆದೇಶ ದಿನಾಂಕ:28-02-2019 ರಲ್ಲಿ ರಾಮನಗರ ಜಿಲ್ಲೆಯ ಹಾರೋಹಳ್ಳಿ ಸೇರಿದಂತೆ ಒಟ್ಟು 12 ತಾಲ್ಲೂಕುಗಳನ್ನು ಘೋಷಿಸಲಾಗಿತ್ತು. ಈ ಪೈಕಿ ಹಾರೋಹಳ್ಳಿ ತಾಲ್ಲೂಕಿಗೆ ಗ್ರಾಮಗಳನ್ನು ಸೇರ್ಪಡೆ ಮಾಡಿ ದಿನಾಂಕ: 28-01-2022 ರಂದು ಅಂತಿಮ ಅಧಿಸೂಚನೆ ಹೊರಡಿಸಿದ್ದು, ದಿನಾಂಕ:04-02-2022 ರಂದು ರಾಜ್ಯಪತ್ರದಲ್ಲಿ ಪ್ರಕಟವಾಗುವುದರೊಂದಿಗೆ ಅಸ್ತಿತ್ವಕ್ಕೆ ಬಂದಿರುತ್ತದೆ.<br>ನೂತನ ಹಾರೋಹಳ್ಳಿ ತಾಲ್ಲೂಕಿನಲ್ಲಿ ಕಂದಾಯ ಇಲಾಖೆ ವತಿಯಿಂದ ತಾಲ್ಲೂಕು ಕಚೇರಿಯನ್ನು ಪ್ರಾರಂಭಿಸಲಾಗುವುದು. ಇನ್ನುಳಿದ ತಾಲ್ಲೂಕು ಮಟ್ಟದ ಕಚೇರಿಗಳನ್ನು ಆಯಾ ಇಲಾಖೆ ವತಿಯಿಂದ ಆರ್ಥಿಕ ಇಲಾಖೆಯಿಂದ ಸಹಮತಿ ಪಡೆದು ಪ್ರಾರಂಭಿಸಬೇಕಾಗಿರುತ್ತದೆ. ಪ್ರಸ್ತುತ ನೂತನ ತಾಲ್ಲೂಕಿನಲ್ಲಿ 'ತಾಲ್ಲೂಕು ಆಡಳಿತ ಸೌಧ' ನಿರ್ಮಾಣಕ್ಕೆ ಸೂಕ್ತ ಸ್ಥಳ ಗುರ್ತಿಸುವ ಪ್ರಕ್ರಿಯೆ ಚಾಲನೆಯಲ್ಲಿದೆ. |
| ಇ) | ಹಾರೋಹಳ್ಳಿ ನೂತನ ತಾಲ್ಲೂಕು ಕಛೇರಿಗಳ ನಿರ್ಮಾಣಕ್ಕಾಗಿ ಮತ್ತು ಮೂಲಭೂತ ಸೌಕರ್ಯಗಳಿಗಾಗಿ ಎಷ್ಟು ಹಣ ಮೀಸಲಿರಿಸಲಾಗಿದೆ; ಈ ಕಛೇರಿಗಳಿಗೆ ಕಲ್ಪಿಸುತ್ತಿರುವ ಮೂಲಭೂತ ಸೌಕರ್ಯಗಳೇನು? (ಸಂಪೂರ್ಣ ವಿವರ ನೀಡು ವುದು) | ನೂತನ ಹಾರೋಹಳ್ಳಿ ತಾಲ್ಲೂಕಿನಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳಗೊಂಡ 'ತಾಲ್ಲೂಕು ಆಡಳಿತ ಸೌಧ' ನಿರ್ಮಿಸಲು ಸ್ಥಳ ಗುರ್ತಿಸಿ ಸವಿವರ ಅಂದಾಜು ಪಟ್ಟಿ ಮತ್ತು ನಕ್ಷೆಯೊಂದಿಗೆ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಸ್ವೀಕೃತವಾದ ನಂತರ ರೂ.10.00 ಕೋಟಿಗಳ ಮಿತಿಯೊಳಗೆ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮ ವಹಿಸಲಾಗುವುದು. |

**ಸಂಖ್ಯೆ: ಕಂಇ 10 ಎಲ್ಆರ್‌ಡಿ 2022**

**(ಆರ್.ಅಶೋಕ)**
ಕಂದಾಯ ಸಚಿವರು